## FEBRUARY 26, 2026
## ALL INDIA RADIO- DHARWAD
## PRADESH SAMACHARA (KANNADA) 7:05 AM

**ಮುಖ್ಯಾಂಶಗಳು**

- **ರಾಜ್ಯದ ವಿವಿಧ** ಇಲಾಖೆಗಳಲ್ಲಿ ಖಾಲಿ ಇರುವ ಸರ್ಕಾರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಬದ್ಧ– ಮುಖ್ಯಮಂತ್ರಿ ಸ್ಪಷ್ಟನೆ.

- **ಬೆಂಗಳೂರು ಸೇರಿದಂತೆ ರಾಜ್ಯದ** ಪ್ರಮುಖ ನಗರ ಪ್ರದೇಶಗಳಿಗೆ ಗೃಹ ಆರೋಗ್ಯ ಯೋಜನೆ ವಿಸ್ತರಣೆ– ಆರೋಗ್ಯ ಸಚಿವರಿಂದ ಮಾಹಿತಿ.

- **ಕಲಬುರಗಿಯ** ಕ್ಯಾನ್ಸರ್ ಚಿಕಿತ್ಸಾ ಆಸ್ಪತ್ರೆಯ ವಿಸ್ತರಣಾ ಕಟ್ಟಡ ಬರುವ ಆಗಸ್ಟ್ ತಿಂಗಳಲ್ಲಿ ಪೂರ್ಣ–ವೈದ್ಯಕೀಯ ಶಿಕ್ಷಣ ಸಚಿವರ ಹೇಳಿಕೆ.

- **'ಬೆಸ್ಟ್ ಏರ್‌ಪೋರ್ಟ್ ಅಟ್** ಅರೈವಲ್ಸ್' ಜಾಗತಿಕ ಏರ್‌ಪೋರ್ಟ್ ಸರ್ವಿಸ್ ಕ್ವಾಲಿಟಿ ಪ್ರಶಸ್ತಿಗೆ ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಭಾಜನ.

**ಈಗ ವಾರ್ತೆಗಳ ವಿವರ**

*******

**ರಾಜ್ಯದ ವಿವಿಧ ಇಲಾಖೆಗಳಲ್ಲಿ** ಖಾಲಿ ಇರುವ ಸರ್ಕಾರಿ ಹುದ್ದೆಗಳನ್ನು ಹಂತ, ಹಂತವಾಗಿ ಭರ್ತಿ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಉಡುಪಿ ಜಿಲ್ಲೆಯ ಕಾರ್ಕಳದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉದ್ಯೋಗ ಒದಗಿಸುವ ಭರವಸೆಯನ್ನು ಸರ್ಕಾರ ನೀಡುತ್ತದೆ. ಒಳಮೀಸಲಾತಿ ಕಾರಣ ನೇಮಕಾತಿ ಪ್ರಕ್ರಿಯೆ ವಿಳಂಬವಾಗಿದ್ದು, ಪ್ರಸ್ತುತ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಲಾಗುವುದು ಎಂದರು.

**ಧ್ವನಿ–ಸಿದ್ದರಾಮಯ್ಯ–18 ಸೆಕೆಂಡ್ಸ್**

ಕಾರ್ಕಳದಲ್ಲಿ ಪರಶುರಾಮ ಥೀಂ ಪಾರ್ಕ್ ನಿರ್ಮಾಣ ಯೋಜನೆಯನ್ನು ಸದ್ಯದಲ್ಲೇ ಪೂರ್ಣಗೊಳಿಸಲಾಗುವುದು. ಆಗುಂಬೆ ಸುರಂಗ ಮಾರ್ಗ ನಿರ್ಮಾಣಕ್ಕೆ ಸಂಬಂಧಿಸಿದಂತೆ ಪರಿಸರವಾದಿಗಳೊಂದಿಗೆ ಚರ್ಚಿಸಿ, ಅನುಮತಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

*******

**ಬೆಂಗಳೂರು ಸೇರಿದಂತೆ ರಾಜ್ಯದ** ಪ್ರಮುಖ ನಗರ ಪ್ರದೇಶಗಳಿಗೆ ಗೃಹ ಆರೋಗ್ಯ ಯೋಜನೆಯನ್ನು ವಿಸ್ತರಿಸಲಾಗುವುದು ಎಂದು ಆರೋಗ್ಯ ಸಚಿವ ದಿನೇಶ ಗುಂಡೂರಾವ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಈ ಕುರಿತು ಮಾಹಿತಿ ನೀಡಿರುವ ಅವರು, ಗ್ರಾಮೀಣ ಭಾಗದಲ್ಲಿ 'ಗೃಹ ಆರೋಗ್ಯ' ಯೋಜನೆಗೆ ದೊರೆತ ಅಭೂತಪೂರ್ವ ಯಶಸ್ಸಿನ ನಂತರ, ನಗರ ಪ್ರದೇಶಗಳಿಗೂ ವಿಸ್ತರಿಸುವ ಚಿಂತನೆ ನಡದಿದೆ. ಈ ಯೋಜನೆಯಡಿ ಇದುವರೆಗೆ ಒಂದು ಕೋಟಿಗೂ ಅಧಿಕ ಜನರನ್ನು ತಲುಪಿ, ಅವರ ಮನೆ ಬಾಗಿಲಿಗೇ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸೆ ತಲುಪಿಸಿರುವುದು ಸರ್ಕಾರದ ಬದ್ಧತೆಗೆ ಸಾಕ್ಷಿ ಎಂದಿದ್ದಾರೆ. ಪ್ರತಿ ಕುಟುಂಬಕ್ಕೂ ಗುಣಮಟ್ಟದ ಆರೋಗ್ಯ ಸೇವೆ ಸಿಗಬೇಕು, ಯಾರೂ ಚಿಕಿತ್ಸೆಯಿಂದ ವಂಚಿತರಾಗಬಾರದು ಎನ್ನುವುದು ಸರ್ಕಾರದ ಸಂಕಲ್ಪ. ಈ ನಿಟ್ಟಿನಲ್ಲಿ ಸಾರ್ವಜನಿಕ ಆರೋಗ್ಯ ವ್ಯವಸ್ಥೆಯನ್ನು ಮತ್ತ ಷ್ಟ ಬಲಪಡಿಸಲು ಸರ್ಕಾರ ಶ್ರಮಿಸುತ್ತಿದೆ ಎಂದು ಸಚಿವ ದಿನೇಶ ಗುಂಡೂರಾವ ತಿಳಿಸಿದ್ದಾರೆ.

*******

**ಕಲಬುರಗಿಯ ಜಿಮ್ಸ್** ಆಸ್ಪತ್ರೆ ಆವರಣದಲ್ಲಿ ಸುಮಾರು 76 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ 210 ಹಾಸಿಗೆಯ ಕ್ಯಾನ್ಸರ್ ಆಸ್ಪತ್ರೆಯ ವಿಸ್ತರಣಾ ಕಟ್ಟಡ ಬರುವ ಆಗಸ್ಟ್ ತಿಂಗಳಲ್ಲಿ ಪೂರ್ಣಗೊಳ್ಳಲಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ತಿಳಿಸಿದ್ದಾರೆ. ಜಿಮ್ಸ್ ಆಸ್ಪತ್ರೆ ಆವರಣದಲ್ಲಿ ನಿರ್ಮಿಸಲಾಗುತ್ತಿರುವ ಕ್ಯಾನ್ಸರ್ ಆಸ್ಪತ್ರೆ, ತಾಯಿ–ಮಕ್ಕಳ ಆಸ್ಪತ್ರೆ, ಸುಟ್ಟು ಗಾಯಗಳ ಘಟಕ, ತೀವ್ರ ನಿಗಾ ಘಟಕ ಕಟ್ಟಡ ಕಾಮಗಾರಿ ಪರಿಶೀಲಿಸಿ, ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಲ್ಲದೇ 92 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ 200 ಹಾಸಿಗೆಯ ತಾಯಿ–ಮಕ್ಕಳ ಆಸ್ಪತ್ರೆ ಕಟ್ಟಡ ಬರುವ ಅಕ್ಟೋಬರ್ ತಿಂಗಳಲ್ಲಿ ಪೂರ್ಣಗೊಳ್ಳಲಿವೆ ಎಂದರು. ಕಾಮಗಾರಿ ಗುಣಮಟ್ಟ ಕಾಯ್ದುಕೊಳ್ಳುವುದರ ಜೊತೆಗೆ ಸೂಚಿತ ಕಾಲಾವಧಿವರೆಗೆ ಕಾಯದೆ ಸಾಧ್ಯವಾದ ಷ್ಟ ಬೇಗ ಕಾಮಗಾರಿ ಮುಗಿಸಬೇಕು ಎಂದು ಗುತ್ತಿಗೆದಾರನಿಗೆ ಸೂಚಿಸಲಾಗಿದೆ. ಕ್ಯಾನ್ಸರ್ ಆಸ್ಪತ್ರೆಯ ಪ್ರಸ್ತುತ 90 ಹಾಸಿಗೆ ಜೊತೆಗೆ 210 ಹಾಸಿಗೆ ಸೇರಿದಲ್ಲಿ 300 ಹಾಸಿಗೆ ಸಾಮರ್ಥ್ಯದೊಂದಿಗೆ ಕಲಬುರಗಿ ಕ್ಯಾನ್ಸರ್ ಆಸ್ಪತ್ರೆ ಉತ್ತರ ಕರ್ನಾಟಕದ ಪ್ರಮುಖ ಕೇಂದ್ರವಾಗಲಿದೆ ಎಂದು ಸಚಿವರು ಹೇಳಿದರು.

*******

**ಆಡಳಿತಾರೂಢ ಕಾಂಗ್ರೆಸ್ ಸರ್ಕಾರ** ಸಾಮಾಜಿಕ ನೆಲೆಗಟ್ಟಿನಲ್ಲಿ ಕೆಲಸ ಮಾಡುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ. ಕಾರ್ಕಳದ ಕುಕ್ಕುಂದೂರಿನಲ್ಲಿ ಕಿಸಾನ್ ಸಭಾ ಟ್ರಸ್ಟ್ ವತಿಯಿಂದ ನಡೆದ ಕಿಸಾನ್ ಸಭಾ ಸಭಾಂಗಣದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಗೃಹಲಕ್ಷ್ಮಿ ಯೋಜನೆಯನ್ನು ಮನೆ ಮನೆಗೆ

ತಲುಪಿಸುವ ಮೂಲಕ ಮಹಿಳಾ ಸಬಲೀಕರಣಕ್ಕೆ ಮುನ್ನುಡಿ ಬರೆಯಲಾಗಿದೆ. ಇದುವರೆಗೆ 26 ಕಂತಿನ ಹಣವನ್ನು 1.24 ಕೋಟಿ ಮಹಿಳೆಯರಿಗೆ ತಲಾ 52 ಸಾವಿರ ರೂಪಾಯಿಯಂತೆ ಪಾವತಿಸಲಾಗಿದೆ ಎಂದು ಸಚಿವರು ಹೇಳಿದರು.

*******

**ಶಿವಮೊಗ್ಗ ಜಿಲ್ಲೆ ಲಿಂಗನಮಕ್ಕಿ** ಜಲಾಶಯದ ಹಿನ್ನೀರಿನಲ್ಲಿ ಸೇತುವೆ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದ್ದು, ಮೇ ಮಾಸಾಂತ್ಯದೊಳಗೆ ಜನಸಂಚಾರಕ್ಕೆ ಮುಕ್ತಗೊಳಿಸಲಾಗುವುದು ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ. ಹಸಿರುಮಕ್ಕಿ ಸೇತುವೆ ನಿರ್ಮಾಣ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿ ಮಾತನಾಡಿದ ಅವರು, ಅನೇಕ ವ ‍ ್ಗಗಳಿಂದ ನೆನೆಗುದಿಗೆ ಬಿದ್ದಿದ್ದ ಕಾಮಗಾರಿಗೆ ಅಗತ್ಯವಿರುವ 56.14 ಕೋಟಿ ರೂಪಾಯಿಗಳ ಅನುದಾನವನ್ನು ಬಿಡುಗಡೆಗೊಳಿಸಿ, ಕಾಮಗಾರಿಗೆ ಚಾಲನೆ ನೀಡಲಾಗಿದೆ ಎಂದರು. ಈ ಸೇತುವೆಯ ನಿರ್ಮಾಣದಿಂದಾಗಿ ಶರಾವತಿ ಸಂತ್ರಸ್ತ ಗ್ರಾಮಗಳಿರುವ ಆರು ಪಂಚಾಯಿತಿಗಳ ನಿವಾಸಿಗಳಿಗೆ ಹಾಗೂ ಸಾಗರ ಪಟ್ಟಣದಿಂದ ಕೊಲ್ಲೂರಿಗೆ 32 ಕೀಲೊ ಮೀಟರ್ ಅಂತರ ಕಡಿತಗೊಳ್ಳಲಿದೆ ಎಂದು ಅವರು ಹೇಳಿದರು.

*******

**ಶಿವಮೊಗ್ಗ ಸೇರಿದಂತೆ** ಸುತ್ತಮುತ್ತಲಿನ 8 ಜಿಲ್ಲೆಗಳಿಗೆ ತನ್ನ ಪ್ರಸಾರ ವ್ಯಾಪ್ತಿಯನ್ನು ವಿಸ್ತರಿಸುತ್ತಿರುವ ಭದ್ರಾವತಿ ಆಕಾಶವಾಣಿಯ ಎಫ್ ಎಂ ಪ್ರಸಾರ ಕೇಂದ್ರ ಇಂದು ಲೋಕಾರ್ಪಣೆಗೊಳ್ಳಲಿದೆ. 10 ಕಿಲೋವ್ಯಾಟ್ ಸಾಮರ್ಥ್ಯದ 'ಎಫ್‌ಎಂ 101.4 ಮೆಗಾಹರ್ಟ್ಸ್' ಪ್ರಸಾರ ಕೇಂದ್ರವನ್ನು ಇಂದು ಮಧ್ಯಾಹ್ನ 12.30 ಕ್ಕೆ ಕೇಂದ್ರ ವಾರ್ತಾ ಮತ್ತು ಪ್ರಸಾರ ಹಾಗೂ ಸಂಸದೀಯ ವ್ಯವಹಾರಗಳ ಖಾತೆ ರಾಜ್ಯ ಸಚಿವ ಡಾ. ಎಲ್.ಮುರುಗನ್ ಅವರು ಈ ನೂತನ ಎಫ್‌ಎಂ ಕೇಂದ್ರವನ್ನು ವಿದ್ಯುಕ್ತವಾಗಿ ಲೋಕಾರ್ಪಣೆ ಮಾಡಲಿದ್ದಾರೆ.

*******

**ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**

**ಪ್ರಕಟಣೆ–42 ಸೆಕೆಂಡ್ಸ್**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

*******

**ಕಂದಾಯ ಇಲಾಖೆಯ ದರಕಾಸ್ತು** ಪೋಡಿ ಹಕ್ಕುಪತ್ರ, ಪೋತಿ ಖಾತೆ ಆರ್‌ಟಿಸಿ ಸೇರಿದಂತೆ ಒಟ್ಟು 20 ಸಾವಿರಕ್ಕೂ ಹೆಚ್ಚು ಹಕ್ಕು ಪತ್ರಗಳನ್ನು ಫಲಾನುಭವಿಗಳಿಗೆ ವಿತರಿಸುವ ಬೃಹತ್ ಕಾರ್ಯಕ್ರಮವನ್ನು ಇದೇ 27 ರಂದು ಹಮ್ಮಿಕೊಳ್ಳಲಾಗಿದೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ. ಕಂದಾಯ ಸಚಿವ ಕೃ ‍ ್ಣಬೈರೇಗೌಡ ಅವರು ಫಲಾನುಭವಿಗಳಿಗೆ ಹಕ್ಕುಪತ್ರ ದಾಖಲೆಗಳನ್ನು ವಿತರಿಸುವ ಮೂಲಕ ಅವರ ಮಾಲೀಕತ್ವಕ್ಕೆ ಸ್ಪ ‍ ್ಟವಾದ ಮುನ್ನುಡಿ ಬರೆಯಲಿದ್ದಾರೆ ಎಂದು ಅವರು ಹೇಳಿದ್ದಾರೆ. ಕಾರ್ಯಕ್ರಮದ ಕುರಿತು ಆಕಾಶವಾಣಿಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ ಜಿಲ್ಲಾಧಿಕಾರಿ ಜಿ.ಪ್ರಭು ಅವರು..

**ಧ್ವನಿ–ಜಿ.ಪ್ರಭು–48 ಸೆಕೆಂಡ್ಸ್**

*******

**ಏರ್ ಪೋರ್ಟ್ಸ್ ಕೌನ್ಸಿಲ್** ಇಂಟರ್ ನ್ಯಾ  ’ನಲ್ ವರ್ಲ್ಡ್ ಜಾಗತಿಕ ಮಟ್ಟದಲ್ಲಿ ನೀಡುವ **2025** ರ "ಬೆಸ್ಟ್ ಏರ್‌ಪೋರ್ಟ್ ಅಟ್ ಅರೈವಲ್ಸ್" ಏರ್‌ಪೋರ್ಟ್ ಸರ್ವಿಸ್ ಕ್ವಾಲಿಟಿ ಪ್ರಶಸ್ತಿಗೆ ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಭಾಜನವಾಗಿದೆ. ಇದು ಮಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸತತ ಎರಡನೇ ವ  ’ದ ಗೌರವವಾಗಿದ್ದು, 2024 ರಲ್ಲಿಯೂ ಇದೇ ವಿಭಾಗದಲ್ಲಿ ಜಾಗತಿಕ ಪ್ರಶಸ್ತಿ ಪಡೆದುಕೊಂಡಿತ್ತು. ಈ ವ  ’ ಜಗತ್ತಿನಾದ್ಯಂತ ಕೇವಲ ಆರು ವಿಮಾನ ನಿಲ್ದಾಣಗಳು ಮಾತ್ರ "ಬೆಸ್ಟ್ ಏರ್‌ಪೋರ್ಟ್ ಅಟ್ ಅರೈವಲ್ಸ್" ವಿಭಾಗಕ್ಕೆ ಆಯ್ಕೆಯಾಗಿದ್ದವು ಎಂದು ವಿಮಾನ ನಿಲ್ದಾಣದ ಅಧಿಕಾರಿಗಳು ತಿಳಿಸಿದ್ದಾರೆ.

*******

**ಮಾಹಿತಿ ಹಕ್ಕು ಕಾಯ್ದೆಯಡಿ ಸಕಾಲದಲ್ಲಿ ಮಾಹಿತಿ** ನೀಡದ ಮಾಲೂರು ತಾಲೂಕು ತಹಸೀಲ್ದಾರ ರೂಪ ಅವರಿಗೆ ಪ್ರತ್ಯೇಕ ಮೂರು ಪ್ರಕರಣಗಳಿಂದ ಒಟ್ಟು 60 ಸಾವಿರ ರೂಪಾಯಿಗಳ ದಂಡ ವಿಧಿಸಲಾಗಿದೆ. ಕರ್ನಾಟಕ ಮಾಹಿತಿ ಆಯೋಗದ ಪೀಠ ಸಂಖ್ಯೆ–5 ರ ಆಯುಕ್ತ ರಾಜಶೇಖರ ಎಸ್ ಅವರು, ಎರಡು ಪ್ರಕರಣಗಳಲ್ಲಿ ತಲಾ 25 ಸಾವಿರ ಹಾಗೂ ಒಂದು ಪ್ರಕರಣದಲ್ಲಿ 10 ಸಾವಿರ ರೂಪಾಯಿ ದಂಡ ವಿಧಿಸಿ ಆದೇಶ ಹೊರಡಿಸಿದ್ದಾರೆ. ಮಾಹಿತಿ ಆಯೋಗದ ಆದೇಶ ಇದ್ದರೂ ಸಹ ಮಾಹಿತಿ ನೀಡದೇ ನಿರ್ಲಕ್ಷ್ಯ ತೋರಿಸಿರುವುದು ಹಾಗೂ ವಿಚಾರಣೆಗೆ ಗೈರು ಹಾಜರಾಗಿದ್ದರಿಂದ ದಂಡ ವಿಧಿಸಲಾಗಿದ್ದು, ವೇತನದಲ್ಲಿ ಒಂದೇ ಬಾರಿಗೆ ಕಟಾವು ಮಾಡಿ ಆಯೋಗದ ಖಾತೆಗೆ ಪಾವತಿಸುವಂತೆ ಕೋಲಾರ ಸಹಾಯಕ ಆಯುಕ್ತರು ಹಾಗೂ ಕೋಲಾರ ಜಿಲ್ಲಾಧಿಕಾರಿ ಅವರಿಗೆ ನಿರ್ದೇಶನ ನೀಡಿದ್ದಾರೆ.

*******

**ಧಾರವಾಡ ಪ್ರಾದೇಶಿಕ ವಿಜ್ಞಾನ** ಕೇಂದ್ರ, ಮೊದಲ ಬಾರಿಗೆ ಇದೇ 27 ಮತ್ತು28 ಅಂದರೆ ನಾಳೆ ಮತ್ತು ನಾಡಿದ್ದು, ಎರಡು ದಿನ 'ವಿಜ್ಞಾನ ಸಂಭ್ರಮ' ಆಯೋಜಿಸಿದೆ. ಉತ್ಸವದಲ್ಲಿ ವಿದ್ಯಾರ್ಥಿಗಳು, ಸಂಶೋಧನಾ ವಿದ್ವಾಂಸರು, ಶಿಕ್ಷಕರು ಮತ್ತು ಸಾರ್ವಜನಿಕರು ಪಾಲ್ಗೊಳ್ಳಲಿದ್ದು, ಪ್ರಸ್ತುತ ವಿಜ್ಞಾನ ಮತ್ತು ತಂತ್ರಜ್ಞಾನದ ಸವಾಲುಗಳ ಕುರಿತು ಚಿಂತನೆ ಮತ್ತು ಉಪನ್ಯಾಸ ಮಾಲಿಕೆ ಆಯೋಜಿಸಲಾಗಿದೆ.

*******

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

**ರಾಜ್ಯದ ವಿವಿಧ** ಇಲಾಖೆಗಳಲ್ಲಿ ಖಾಲಿ ಇರುವ ಸರ್ಕಾರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಬದ್ಧ– ಮುಖ್ಯಮಂತ್ರಿ ಸ್ಪಷ್ಟನೆ.

**ಬೆಂಗಳೂರು ಸೇರಿದಂತೆ ರಾಜ್ಯದ** ಪ್ರಮುಖ ನಗರ ಪ್ರದೇಶಗಳಿಗೆ ಗೃಹ ಆರೋಗ್ಯ ಯೋಜನೆ ವಿಸ್ತರಣೆ– ಆರೋಗ್ಯ ಸಚಿವರಿಂದ ಮಾಹಿತಿ.

**ಕಲಬುರಗಿಯ** ಕ್ಯಾನ್ಸರ್ ಆಸ್ಪತ್ರೆಯ ವಿಸ್ತರಣಾ ಕಟ್ಟಡ ಬರುವ ಆಗಸ್ಟ್ ತಿಂಗಳಲ್ಲಿ ಪೂರ್ಣ–ವೈದ್ಯಕೀಯ ಶಿಕ್ಷಣ ಸಚಿವರ ಹೇಳಿಕೆ.

**“ಬೆಸ್ಟ್ ಏರ್‌ಪೋರ್ಟ್ ಅಟ್ ಅರೈವಲ್ಸ್” ಜಾಗತಿಕ** ಏರ್‌ಪೋರ್ಟ್ ಸರ್ವಿಸ್ ಕ್ವಾಲಿಟಿ ಪ್ರಶಸ್ತಿಗೆ ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಭಾಜನ.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

******END******